# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **133** |
| ಸದಸ್ಯರ ಹೆಸರು | : | ಶ್ರೀ. ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | **05/12/2023** |
| ಉತ್ತರಿಸುವ ಸಚಿವರು | : | **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| ಅ | ಬಾಗಲಕೋಟೆ, ವಿಜಯಪುರ ಜಿಲ್ಲೆಯಲ್ಲಿನ ನಗರಸಭೆ/ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು; | ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಒಟ್ಟು 31 ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಿದ್ದು, ವಿವರ ಈ ಕೆಳಕಂಡಂತಿದೆ: |

| ಜಿಲ್ಲೆ | ನಗರಸಭೆ | ಪುರಸಭೆ | ಪಟ್ಟಣ ಪಂಚಾಯಿತಿ |
|---|---|---|---|
| ಬಾಗಲಕೋಟೆ | 5 | 5 | 7 |
| ವಿಜಯಪುರ | 0 | 5 | 9 |
| ಒಟ್ಟು | 5 | 10 | 16 |

| | ಪ್ರಶ್ನೆ | ಉತ್ತರ |
|---|---|---|
| ಆ | ಪ್ರಸ್ತುತ ನಗರಸಭೆಗಳನ್ನು ಪುರಸಭೆ ಮಾಡಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳೆಷ್ಟು ಇವೆ; ಹಾಗಿದ್ದಲ್ಲಿ, ಅವುಗಳ ಮಾಹಿತಿ ನೀಡುವುದು; | ಇಂತಹ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| ಇ | ಈ ಹಿಂದೆ ಎಷ್ಟು ನಗರಸಭೆಗಳನ್ನು ಪುರಸಭೆಗಳನ್ನಾಗಿ ಮಾಡಲಾಗಿದೆ; ಎಷ್ಟು ಪುರಸಭೆಗಳನ್ನು ಮೇಲ್ದರ್ಜೆಗೆ ಏರಿಸಲಾಗಿದೆ (ಪೂರ್ಣ ಮಾಹಿತಿ ನೀಡುವುದು); | ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಯಾವುದೇ ನಗರಸಭೆಯನ್ನು ಪುರಸಭೆಯನ್ನಾಗಿ ಕೆಳದರ್ಜೆಗೆ ತಂದಿರುವುದಿಲ್ಲ.<br><br>2011 ರ ಜನಗಣತಿಯ ನಂತರ ಬಾಗಲಕೋಟೆ ಜಿಲ್ಲೆಯ ಮುಧೋಳ ನಗರಸಭೆಯನ್ನು 2015 ರ ಸಾಲಿನಲ್ಲಿ ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು, ವಿಜಯಪುರ ಜಿಲ್ಲೆಯಲ್ಲಿ ಯಾವುದೇ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಿರುವುದಿಲ್ಲ. |
| ಈ | ಪ್ರಸಕ್ತ ನಗರಸಭೆ/ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳನ್ನು ಮೇಲ್ದರ್ಜೆಗೆ ಏರಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಈ ಕುರಿತು ಮಾಹಿತಿ ನೀಡುವುದು? | ವಿಜಯಪುರ ಜಿಲ್ಲೆಯ ಇಂಡಿ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಅಗತ್ಯ ದಾಖಲೆಗಳೊಂದಿಗೆ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಪ್ರಸ್ತಾವನೆಯನ್ನು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರನ್ವಯ ಸೂಕ್ತ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸಿದಲ್ಲಿ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುತ್ತದೆ.<br><br>ಬಾಗಲಕೋಟೆ ಜಿಲ್ಲೆಯ ಬೀಳಗಿ ಪಟ್ಟಣ ಪಂಚಾಯಿತಿ ಹಾಗೂ ಬೆಳಗಲಿ ಪಟ್ಟಣ ಪಂಚಾಯಿತಿಯನ್ನು ಪುರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲು ಜಿಲ್ಲಾಧಿಕಾರಿಯವರು ಸಲ್ಲಿಸಿರುವ ದಾಖಲೆಗಳನ್ವಯ ಪೌರಾಡಳಿತ ನಿರ್ದೇಶಕರು ನಿಯಮಾನುಸಾರ ಪರಿಶೀಲಿಸಿ, ಪ್ರಸ್ತಾವನೆಯನ್ನು ದಾಖಲೆಗಳು ಮತ್ತು ಸೂಕ್ತ |

| | | |
|---|---|---|
| | | ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಸಹಮತಿ ದೊರೆತ ನಂತರ ಮಾನದಂಡಗಳನ್ನು ಪೂರೈಸುತ್ತಿದ್ದಲ್ಲಿ ನಿಯಮಾನುಸಾರ ಮುಂದಿನ ಕ್ರಮವಹಿಸಲಾಗುತ್ತದೆ.<br><br>ಪ್ರಸ್ತುತ, ಹೆಚ್ಚುವರಿ ರಿಜಿಸ್ಟ್ರಾರ್ ಜನರಲ್ ಮತ್ತು ಜನಗಣತಿ ಆಯುಕ್ತಾಲಯ, ಗೃಹ ಮಂತ್ರಾಲಯ, ನವದೆಹಲಿ ರವರ ನಿರ್ದೇಶನದಂತೆ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳನ್ನ ಮೇಲ್ದರ್ಜೆಗೇರಿಸಲು ಹಾಗೂ ಗಡಿಗಳನ್ನು ವಿಸ್ತರಿಸಲು ದಿನಾಂಕ: 31/12/2023 ರವರೆಗೆ ಕಾಲಾವಕಾಶ ನಿಗದಿಪಡಿಸಿ ಕಂದಾಯ ಇಲಾಖೆಯಿಂದ ಆದೇಶವನ್ನು ಹೊರಡಿಸಲಾಗಿರುತ್ತದೆ. ಆದ್ದರಿಂದ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳ ಇನ್ನುಳಿದ ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆಗಳನ್ನು ಮೇಲ್ದರ್ಜೆಗೇರಿಸಲು ಅಗತ್ಯ ದಾಖಲೆಗಳೊಂದಿಗೆ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಪ್ರಸ್ತಾವನೆಯನ್ನು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರನ್ವಯ ಸೂಕ್ತ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸಿದಲ್ಲಿ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುತ್ತದೆ. |

**ಸಂಖ್ಯೆ:ನಅಇ 25 ಎಲ್‌ಸಿಕ್ಯೂ 2023.**

(ರಹೀಂ ಖಾನ್)

**ಪೌರಾಡಳಿತ ಹಾಗೂ ಹಜ್ ಸಚಿವರು**